RNU AIR DHARWAD

AUGUST 23, 2026

# AKASHAVANI - DHARWAD

# PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ವಿಜಯಪುರ ಜಿಲ್ಲೆಯಲ್ಲಿ ಕೋಟಿ ವೃಕ್ಷ ಅಭಿಯಾನದ** ಮೂಲಕ, 1 ಕೋಟಿ 5 ಲಕ್ಷ ಸಸಿಗಳನ್ನು ನೆಡಲಾಗಿದ್ದು, ಬರಡು ಭೂಮಿಯಲ್ಲಿ ಹಸಿರು ಹೊದಿಕೆ ಸೃಷ್ಟಿಯಾಗಿದೆ. ಕಳೆದ ನಾಲ್ಕು ವರ್ಷಗಳಲ್ಲಿ ಶೇಕಡ 2 ದಶಾಂಶ 4 ರಷ್ಟು ಅರಣ್ಯ ವ್ಯಾಪ್ತಿ ಹೆಚ್ಚಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ಹಸಿರೀಕರಣ ಯೋಜನೆಯ ಮೂಲಕ ಜೀವ ವೈವಿಧ್ಯ ಸಮೃದ್ಧಗೊಂಡಿದ್ದು, ಅಂತರ್ಜಲ ಮಟ್ಟದಲ್ಲೂ ಸುಧಾರಣೆ ಕಂಡಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

**ದಾವಣಗೆರೆಯ ಅಮರ ಜವಾನ್ ಉದ್ಯಾನವನದಲ್ಲಿ** ಪ್ರದರ್ಶನದ ದೃಷ್ಟಿಯಿಂದ, ಸೇವೆಯಿಂದ ನಿವೃತ್ತಿಗೊಳಿಸಲಾದ ವಿಂಟೇಜ್ ಯುದ್ಧ ಟ್ಯಾಂಕ್ ಹಾಗೂ ಯುದ್ಧವಿಮಾನ ಮಂಜೂರು ಮಾಡುವಂತೆ ಕೇಂದ್ರ ರಕ್ಷಣಾ ಖಾತೆ ಸಚಿವ ರಾಜನಾಥ ಸಿಂಗ್ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ದಾವಣಗೆರೆ ಸಂಸದರಾದ ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ಜಿಲ್ಲಾ ಸೈನಿಕ ಮಂಡಳಿಯನ್ನು ಮರುಸ್ಥಾಪಿಸಬೇಕು ಹಾಗೂ ಸಿ.ಎಸ್.ಡಿ ಮಳಿಗೆಯನ್ನು ಆರಂಭಿಸುವಂತೆ ಮನವಿ ಮಾಡಲಾಗಿದೆ ಎಂದು ಹೇಳಿದ್ದಾರೆ.

<><><>

**ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲೂಕು,** ಭೂಮಶೆಟ್ಟಿಹಳ್ಳಿಯಲ್ಲಿ ವಿಕಸಿತ ಭಾರತ ಜಿ–ರಾಮ–ಜಿ ಯೋಜನೆಯಡಿ ನಡೆಯುತ್ತಿರುವ ಕೆರೆ ಹೂಳೆತ್ತುವ ಕಾಮಗಾರಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಖಾತೆ ಸಚಿವ ಈಶ್ವರ ಖಂಡ್ರೆ ಪರಿಶೀಲಿಸಿದರು. ವಿಬಿ ಜಿ ರಾಮ ಜಿ ಯೋಜನೆಯಡಿ, ರಾಜ್ಯಾದ್ಯಂತ ಕೆಲಸ ಮಾಡಲು ಇಚ್ಛಿಸುವ ಪ್ರತಿಯೊಬ್ಬರಿಗೂ ಉದ್ಯೋಗ ಒದಗಿಸಲಾಗುತ್ತಿದೆ. ಯೋಜನೆಯ ಸದುಪಯೋಗ ಪಡೆದು, ಗ್ರಾಮಗಳ ಅಭಿವೃದ್ಧಿಗೆ ಕೈ ಜೋಡಿಸಬೇಕು ಎಂದು ಕರೆ ನೀಡಿದರು.

<><><>

**ಬಾಗಲಕೋಟೆ ಜಿಲ್ಲೆಯ 196 ಗ್ರಾಮ ಪಂಚಾಯಿತಿಗಳಲ್ಲಿ** ವಿಬಿ.ಜಿ.ರಾಮ್.ಜಿ ಯೋಜನೆ ಜಾಗೃತಿ ಅಭಿಯಾನಕ್ಕೆ ಜಿಲ್ಲಾಧಿಕಾರಿ ಸಂಗಪ್ಪ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ ಜಂಟಿಯಾಗಿ ಚಾಲನೆ ನೀಡಿದರು.

<><><>

**ಧಾರವಾಡ ಜಿಲ್ಲೆ, ಹಳೆ ಹುಬ್ಬಳ್ಳಿಯ** ಪುರಾತನ, ಚಾಲುಕ್ಯರ ಕಾಲದ ಐತಿಹಾಸಿಕ ಭವಾನಿ ಶಂಕರ ಹಾಗೂ ಶ್ರೀ ನಾರಾಯಣ ದೇವಸ್ಥಾನದ ಪವಿತ್ರ ಪುಷ್ಕರಣಿಯ ಜಾಗವನ್ನು ಆಕ್ರಮಿಸಿ ರಸ್ತೆ ನಿರ್ಮಿಸಲಾಗಿದೆ. ಈ ರಸ್ತೆಯನ್ನು ತಕ್ಷಣವೇ ತೆರವುಗೊಳಿಸಿ, ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಜಾಗೆಯನ್ನು ದೇವಸ್ಥಾನಕ್ಕೆ ಹಸ್ತಾಂತರಿಸಬೇಕು ಎಂದು ಕೇಂದ್ರ ಶಿಕ್ಷಣ ಖಾತೆ ಸಚಿವ ಪ್ರಲ್ಹಾದ್ ಜೋಶಿ ಆಗ್ರಹಿಸಿದ್ದಾರೆ.

<><><>

**ಇಂದು ಕನ್ನಡದ ನಿಘಂಟು ತಜ್ಞ,** ಪದ್ಮಶ್ರೀ ಪುರಸ್ಕೃತ ಪ್ರೊಫೆಸರ್ ಜಿ. ವೆಂಕಟಸುಬ್ಬಯ್ಯ ಅವರ ಜನ್ಮದಿನ. ಭಾಷಾ ಸಂಶೋಧನಾ ಕೃತಿಗಳ ಮೂಲಕ ಕನ್ನಡ ಶಬ್ದಕೋಶವನ್ನು ಶ್ರೀಮಂತಗೊಳಿಸಿದ ವೆಂಕಟಸುಬ್ಬಯ್ಯ ಅವರ ಕೊಡುಗೆಗಳನ್ನು ಸ್ಮರಿಸಿರುವ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಗೌರವ ನಮನಗಳನ್ನು ಸಲ್ಲಿಸಿದ್ದಾರೆ.

<><><>

**ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ ಹಿನ್ನೆಲೆ,** ಇಂದು ಬೆಂಗಳೂರಿನ ಜವಹರಲಾಲ್ ನೆಹರೂ ತಾರಾಲಯ ಆವರಣದಲ್ಲಿ ಚಂದ್ರಯಾನ, ಆದಿತ್ಯ ಎಲ್–1, ಆರ್ಯಭಟ ಸೇರಿದಂತೆ ವಿವಿಧ ಬಾಹ್ಯಾಕಾಶ ಮಾದರಿಗಳ ಪ್ರದರ್ಶನ ಆಯೋಜಿತವಾಗಿದೆ. ಬೆಳಗ್ಗೆ 10 ಗಂಟೆಗೆ ಆರಂಭಗೊಂಡಿದ್ದು, ಸಂಜೆ 5 ಗಂಟೆ ತನಕ ನಡೆಯಲಿದೆ. ಪ್ರಸ್ತುತ ನೋಂದಾಯಿತ ವಿದ್ಯಾರ್ಥಿಗಳಿಗಾಗಿ 'ಬಾಹ್ಯಾಕಾಶ ಮತ್ತು ಭಾರತ' ವಿಷಯದ ರಸಪ್ರಶ್ನೆ ಸ್ಪರ್ಧೆ ಜರುಗುತ್ತಿದೆ.

<><><>

**ಬಳ್ಳಾರಿ ನಗರದ ಜಿಲ್ಲಾ ಹಾಕಿ** ಕ್ರೀಡಾಂಗಣದಲ್ಲಿ ನಾಳೆಯಿಂದ, 28 ರ ವರೆಗೆ, ರಾಜ್ಯ ಮಟ್ಟದ 16 ವ ರ್ದೊಳಗಿನ ಪುರುಷರ ಸಬ್ ಜೂನಿಯರ್ ಹಾಕಿ ಪಂದ್ಯಾವಳಿ ಆಯೋಜಿತವಾಗಿದೆ. ಒಟ್ಟು 12 ತಂಡಗಳು ಪಾಲ್ಗೊಳ್ಳಲಿವೆ. ಕರ್ನಾಟಕ ಹಾಕಿ ಅಸೋಸಿಯೇ ನ್ ಸಹಕಾರದೊಂದಿಗೆ, ಬಳ್ಳಾರಿ ಜಿಲ್ಲಾ ಹಾಕಿ ಅಸೋಸಿಯೇ ನ್ ಆಯೋಜಿಸಿರುವ ಪಂದ್ಯಾವಳಿ, ಲೀಗ್ ಕಂ ನಾಕೌಟ್ ಮಾದರಿಯಲ್ಲಿ ನಡೆಯಲಿದೆ.

<><><>

**ಪ್ರಯಾಣಿಕರ ಹೆಚ್ಚುವರಿ ದಟ್ಟನೆ ನಿವಾರಿಸಲು** ನೈಋತ್ಯ ರೇಲ್ವೆ ಇಂದು ಸಂಜೆ 4.40 ಕ್ಕೆ ಬೆಂಗಳೂರಿನ ಸರ್.ಎಂ ವಿಶ್ವೇಶ್ವರಾಯ ಟರ್ಮಿನಲ್ ನಿಂದ ಮಂಗಳೂರು ಜಂಕ್ಷನ್ ಗೆ ಏಕಮುಖ ವಿಶೇಷ ರೈಲು ಸೇವೆ ಕಲ್ಪಿಸಿದೆ. ರೈಲು ನಾಳೆ ಬೆಳಗ್ಗೆ 9.30 ಕ್ಕೆ ಮಂಗಳೂರು ಜಂಕ್ಷನ್ ತಲುಪಲಿದೆ.

<><><>

**ಧಾರವಾಡ ನಗರ, ಹಳೆ ಬಸ್ ನಿಲ್ದಾಣ ಸಮೀಪದ** ಕಾರ್ಪೊರೇಶನ್ ಆಸ್ಪತ್ರೆಯಲ್ಲಿ ಇಂದು ಮೆಗಾ ರಕ್ತದಾನ ಶಿಬಿರ ಆಯೋಜಿತವಾಗಿದೆ. ಸ್ವಾಮಿ ವಿವೇಕಾನಂದ ರಕ್ತದಾನ ಫೌಂಡೇಶನ್ ಹಾಗೂ ಜನಸೇವಾ ಮಂಚ್ ಆಶ್ರಯದಲ್ಲಿ ಆಯೋಜಿತ ಮೆಗಾ ರಕ್ತದಾನ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರ ಬೆಳಗ್ಗೆ 8 ಗಂಟೆಗೆ ಆರಂಭಗೊಂಡಿದ್ದು, ಸಂಜೆ 4 ಗಂಟೆ ವರೆಗೆ ನಡೆಯಲಿದೆ.

<><><>

**ಬೆಳಗಾವಿ ನಗರದ ಕಾಕತಿವೇಸ್ ನಲ್ಲಿರುವ, ಕರ್ನಾಟಕ ಪಬ್ಲಿಕ್ ಶಾಲೆ–ಸರದಾರ** ಪ್ರೌಢಶಾಲೆಯ ರೋಬೋಟಿಕ್, ಭಾ ಾ ಹಾಗೂ ವರ್ಚುವಲ್ ಪ್ರಯೋಗಾಲಯಗಳನ್ನು ಶಾಸಕ ಆಸಿಫ್ ಸೇಠ್ ಉದ್ಘಾಟಿಸಿದರು.

<><><>

**ಕೊಡಗು ಜಿಲ್ಲೆ, ಪಾಡಿ ಶ್ರೀ ಇಗ್ಗುತಪ್ಪ ದೇವಾಲಯದಲ್ಲಿ,** ರಾಜ್ಯದಲ್ಲಿ ಉತ್ತಮ ಮಳೆ, ಬೆಳೆ ಹಾಗೂ ಸಮೃದ್ಧಿಗಾಗಿ ಜಿಲ್ಲಾ ಉಸ್ತುವಾರಿ ಸಚಿವ ಪಿ.ಎಂ ನರೇಂದ್ರ ಸ್ವಾಮಿ ಪ್ರಾರ್ಥಿಸಿ, ವಿಶೇಷ ಪೂಜೆ ಸಲ್ಲಿಸಿದರು. ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಎ.ಎಸ್ ಪೊನ್ನಣ್ಣ, ಮಡಿಕೇರಿ ಶಾಸಕ ಡಾಕ್ಟರ ಮಂತರಗೌಡ ಇದ್ದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>